**MVC-456/2025** **ಪಿ.ಡಬ್ಲ್ಯೂ-1 (ಆರ್.ಮನೋಜ್)**

ದಿನಾಂಕಃ **17.02.2026** ರಂದು ಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲುಃ 1 ನೇ ಎದುರುದಾರರ ಪರ ಶ್ರೀ. ಎ.ಜೆ. ವಕೀಲರಿಂದಃ**

ನನ್ನ ವಯಸ್ಸನ್ನು ದೃಢೀಕರಿಸುವ ದಾಖಲೆಯನ್ನು ಹಾಜರುಪಡಿಸಿರುತ್ತೇನೆ. ನಾನು ಅರ್ಜಿಯಲ್ಲಿ ತಿಳಿಸಿರುವಂತೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಅಪಘಾತ ಆಗಿರುವುದಿಲ್ಲ ಎಂದರೆ ಸರಿಯಲ್ಲ.ಅಪಘಾತದಿಂದ ನನಗೆ ಯಾವುದೇ ಗಾಯಗಳಾಗಿರುವುದಿಲ್ಲ ಎಂದರೆ ಸರಿಯಲ್ಲ. ನಾಗರಾಜೇಗೌಡ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡಿರುತ್ತೇನೆಂದು ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ. ಆಸ್ಪತ್ರೆಯಲ್ಲಿ ದಾಖಲಾಗಿ ಯಾವುದೇ ರೀತಿಯ ಚಿಕಿತ್ಸೆಯನ್ನು ಪಡೆದಿರುವುದಿಲ್ಲ, ಒಳರೋಗಿಯಾಗಿ ಚಿಕಿತ್ಸೆ ಪಡೆದಿರುವುದಿಲ್ಲ ಎಂದರೆ ಸರಿಯಲ್ಲ. ಆಸ್ಪತ್ರೆಗೆ 5 ಲಕ್ಷ ಖರ್ಚಾಗಿರುತ್ತದೆ ಎಂದು ಸುಳ್ಳಾಗಿ ನುಡಿದಿದ್ದೇನೆ ಎಂದರೆ ಸರಿಯಲ್ಲ. ಸಹಾಯಕರ ಖರ್ಚು, ಕಾರು ಬಾಡಿಗೆ, ಮುಂದುವರೆದ ಚಿಕಿತ್ಸೆಯ ಖರ್ಚು ಇತ್ಯಾದಿಗಳನ್ನು ಪ್ರಕರಣಕ್ಕೆ ತಕ್ಕಂತೆ ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ಮುಂದುವರೆದ ಖರ್ಚು ಅವಶ್ಯಕತೆ ಇದೆ ಎಂದು ಸುಳ್ಳಾಗಿ ನುಡಿದಿದ್ದೇನೆ ಎಂದರೆ ಸರಿಯಲ್ಲ. ನಾನು 40,000/- ರೂಪಾಯಿ ಸಂಪಾದನೆ ಮಾಡುತ್ತಿದ್ದೇನೆ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ತಪ್ಪಿನಿಂದಲೇ ಅಪಘಾತ ಆಗಿದ್ದರೂ ಸಹ 1 ನೇ ಎದುರುದಾರರನ್ನು ಪ್ರಕರಣದಲ್ಲಿ ಪಕ್ಷಗಾರರನ್ನಾಗಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಹಾಜರುಪಡಿಸಿರುವ ಬಿಲ್ಲುಗಳು ಮತ್ತು ಇತರ ದಾಖಲೆಗಳನ್ನು ಪ್ರಕರಣಕ್ಕಾಗಿ ಸೃಷ್ಟಿಸಿದ್ದವು ಎಂದರೆ ಸರಿಯಲ್ಲ. ಕೋರಿರುವ ಪರಿಹಾರ ಪಡೆದುಕೊಳ್ಳಲು ನಾನು ಅರ್ಹನಲ್ಲ ಎಂದರೆ ಸರಿಯಲ್ಲ. ನಾನು ಪರಿಹಾರ ಪಡೆದುಕೊಳ್ಳಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಪರಿಹಾರ ಪಾವತಿಸಲು 1 ನೇ ಎದುರುದಾರರು ಬಾಧ್ಯಸ್ಥರಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆ: ಇಲ್ಲ.**

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಈ ದಿನ ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸ ಇ**

**1** ನೇ **ಅಪರ ಹಿರಿಯ ಸಿಜೆ ಮತ್ತು ಎಂಎಸಿಟಿ.,**
**ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**